**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ,**
**ಮಡಿಕೇರಿ-ಕೊಡಗು**

**Crl.A No.** 137/2025

**PW-1**

**ಸಾಕ್ಷಿಯನ್ನು ದಿನಾಂಕ 11-02-2026 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯವಿಚಾರಣೆ ಅರ್ಜಿದಾರರ ಪರ ಶ್ರೀ. ಡಿ.ಕೆ.ಆರ್ ವಕೀಲರಿಂದಃ**

1. ನಾನು ನನ್ನ ಮುಖ್ಯವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿ ಬರೆದ ವಿಷಯಗಳು ನನ್ನ ನಂಬಿಕೆ ಮತ್ತು ಜ್ಞಾನಕ್ಕೆ ಸಂಬಂಧಪಟ್ಟಂತೆ ನಿಜ ಇರುತ್ತದೆ.

**ಪಾಟೀಸವಾಲು- ಎದುರುದಾರರ ಪರ ಸರ್ಕಾರಿ ಅಭಿಯೋಜಕರಿಂದಃ**

2. ನಾನು ವಿದ್ಯಾವಂತ ಎಂದರೆ ಸರಿ. ವಿಚಾರಣಾ ನ್ಯಾಯಾಲಯದಲ್ಲಿ ನನ್ನ ವಿರುದ್ಧವಾಗಿ ಆದೇಶವಾಗಿರುತ್ತದೆ ಎಂದರೆ ಸರಿ. ಸದರಿ ಆದೇಶದ ವಿರುದ್ಧ ಮೇಲ್ಮನವಿ ಹೂಡಲು ಸಾಕಷ್ಟು ಕಾಲಾವಕಾಶ ಇರುತ್ತದೆ ಎಂದರೆ ಸರಿ. ಸದರಿ ಮೇಲ್ಮನವಿಯನ್ನು ಹೂಡಲು ಸಾಕಷ್ಟು ಕಾಲಾವಕಾಶ ಇದ್ದರೂ ಸಹ ನನ್ನ ನಿರ್ಲಕ್ಷತೆಯಿಂದಲೇ 463 ದಿನಗಳು ತಡವಾಗಿ ಮೇಲ್ಮನವಿ ಸಲ್ಲಿಸಿರುತ್ತೇನೆಂದರೆ ಸಾಕ್ಷಿಯು ನನಗೆ ಪ್ರತಿವಾದಿಗಳಿಂದ ಸರಿಯಾದ ರೀತಿಯಲ್ಲಿ ಕಾನೂನು ತಿಳುವಳಿಕೆ ನೋಟಿಸ್ಸು ಬಂದಿರುವುದಿಲ್ಲ, ಆ ಕಾರಣಕ್ಕಾಗಿ ತಡವಾಗಿರುತ್ತದೆ ಎನ್ನುತ್ತಾರೆ. ವಿಚಾರಣಾ ನ್ಯಾಯಾಲಯದಲ್ಲಿ ನನ್ನ ವಿರುದ್ಧವಾಗಿ ತಿರ್ಪು ನೀಡಿರುವ ವಿಚಾರ

ನನಗೆ ಗೊತ್ತಿದ್ದರೂ ಸಹ ಅಪೀಲು ಸಲ್ಲಿಸಲು ಉದ್ದೇಶಪೂರ್ವಕವಾಗಿ ನಿರ್ಲಕ್ಷತೆಯಿಂದ ಕಾಲ ವಿಳಂಬ ಮಾಡಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/-xxx

1 ನೇ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರು,

ಕೊಡಗು-ಮಡಿಕೇರಿ.